ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಸೋಲಾರ್ ಪಾರ್ಕ್ ನಿರ್ಮಾಣದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

744 (934) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 5 ವರ್ಷಗಳಿಂದ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ಸೋಲಾರ್ ಪಾರ್ಕ್ ನಿರ್ಮಿಸಲು ಸರ್ಕಾರ ಜಮೀನನ್ನು ಭೂ ಸ್ವಾಧೀನ ಪಡಿಸಿಕೊಂಡಿದೆ ; ಈ ಜಮೀನಿನಲ್ಲಿರುವ ಸರ್ಕಾರಿ ಜಮೀನು ಎಷ್ಟು ; ರೈತರಿಂದ ವಶಪಡಿಸಿಕೊಂಡಿರುವ ಜಮೀನು ಎಷ್ಟು ; (ವಿವರ ನೀಡುವುದು)

(ಆ) ರೈತರ ಒಪ್ಪಿಗೆ ಇಲ್ಲದೆ ಪಾವಗಡ ತಾಲ್ಲೂಕಿನ ಅತಿ ಸಣ್ಣ ಹಿಡುವಳಿ ರೈತರಿಂದ ಈ ಉದ್ದೇಶಕ್ಕಾಗಿ ಬಲವಂತದಿಂದ ಜಮೀನನ್ನು ಭೂ ಸ್ವಾಧೀನ ಪಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ರೀತಿ ಕ್ರಮ ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಭೂ ಸ್ವಾಧೀನಪಡಿಸಿಕೊಂಡ ರೈತರಿಗೆ ಯಾವ ಮಾನದಂಡ ಅನುಸರಿಸಿ ಪರಿಹಾರ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಮಾರುಕಟ್ಟೆ ದರಕ್ಕಿಂತ ಕಡಿಮೆ ದರ ನೀಡಿ ರೈತರ ಜಮೀನನ್ನು ವಶಕ್ಕೆ ಪಡೆದಿರುವುದರಿಂದ ರೈತರಿಗೆ ಅನ್ಯಾಯವಾಗಿರುವುದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ? (ವಿವರ ನೀಡುವುದು)